# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 146 |
| ಉತ್ತರಿಸಬೇಕಾದ ದಿನಾಂಕ | 28.01.2026 |
| ಸದಸ್ಯರ ಹೆಸರು | ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭಾಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ಕಲಬುರ್ಗಿ ಜಿಲ್ಲೆಯಲ್ಲಿ ಕೊಳಚೆ ನಿರ್ಮೂಲನಾ ಮಂಡಳಿಯ ವತಿಯಿಂದ ಮನೆಗಳನ್ನು ನೀಡಲು ಅರ್ಜಿ ಸಲ್ಲಿಸಿದ ಫಲಾನುಭವಿಗಳ ಸಂಖ್ಯೆ ಎಷ್ಟು; ಅದರಲ್ಲಿ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ನೀಡಲಾಗಿದೆ; | ಕಳೆದ ಮೂರು ವರ್ಷಗಳಲ್ಲಿ ಕಲಬುರ್ಗಿ ಜಿಲ್ಲೆಯಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಗೆ ಮನೆಗಳನ್ನು ನೀಡಲು ಯಾವುದೇ ಅರ್ಜಿ ಸಲ್ಲಿಕೆಯಾಗಿರುವುದಿಲ್ಲ.<br><br>• ಪ್ರಧಾನ ಮಂತ್ರಿ ಆವಾಸ್ ಯೋಜನೆಯ ಮಾರ್ಗಸೂಚಿಯನ್ವಯ ಕೊಳಗೇರಿ ಪ್ರದೇಶಗಳಲ್ಲಿನ ಮನೆ ಮನೆ ಬೇಡಿಕೆ ಸಮೀಕ್ಷೆ ಮಾಡಿ ಕಚ್ಚಾ ಮತ್ತು ಸೆಮಿ ಪಕ್ಕಾ ಮನೆಗಳ ಸಮೀಕ್ಷೆ ಪಟ್ಟಿ ತಯಾರಿಸಿ, ಬೇಡಿಕೆಗೆ ಅನುಗುಣವಾಗಿ 2015 16ನೇ ಸಾಲಿನಿಂದ 2018 19ನೇ ಸಾಲಿನ ವರೆಗೆ ಕಲಬುರ್ಗಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕೊಳಗೇರಿ ಪ್ರದೇಶಗಳಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಒಟ್ಟು 12516 ಮನೆಗಳ ನಿರ್ಮಾಣಕ್ಕೆ ಮಂಜೂರಾತಿ ದೊರಕಿರುತ್ತದೆ.<br><br>• ಈ ಯೋಜನೆಯಡಿ ಮಂಡಳಿ ವತಿಯಿಂದ ಪೂರ್ಣಗೊಳಿಸಿರುವ ಮನೆಗಳ ಪೈಕಿ ಮಾರ್ಚ್ – 2024 ರಲ್ಲಿ 2266 ಮನೆಗಳನ್ನು ಮತ್ತು ಜನವರಿ – 2026 ರಲ್ಲಿ 2265 ಮನೆಗಳನ್ನು ಫಲಾನುಭವಿಗಳಿಗೆ ನೀಡಲಾಗಿದೆ. |
| ಆ) | ಉಳಿದ ಫಲಾನುಭವಿಗಳಿಗೆ ಮನೆಗಳನ್ನು ಯಾವಾಗ ನೀಡಲಾಗುವುದು; | ಸದರಿ ಯೋಜನೆಯಡಿ ಪ್ರಗತಿಯಲ್ಲಿರುವ ಮನೆಗಳನ್ನು ಫಲಾನುಭವಿಗಳಿಂದ ಫಲಾನುಭವಿ ವಂತಿಕೆಯನ್ನು ಪಾವತಿಸಿಕೊಂಡು, ಸರ್ಕಾರದಿಂದ ಬಿಡುಗಡೆಯಾಗುವ ಅನುದಾನದ ಲಭ್ಯತೆಗೆ ಅನುಗುಣವಾಗಿ ಹಂತ ಹಂತವಾಗಿ ಮನೆಗಳನ್ನು ಪೂರ್ಣಗೊಳಿಸಿ ಯೋಜನೆಯ ಅನುಷ್ಠಾನದ ವಿಸ್ತರಣಾವಧಿಯೊಳಗೆ ಹಂಚಿಕೆ ಮಾಡಲು ಕ್ರಮವಹಿಸಲಾಗುತ್ತಿದೆ. |
| ಇ) | ಮನೆಗಳ ನಿರ್ಮಾಣ ಪೂರ್ಣಗೊಳ್ಳದಿರಲು ಕಾರಣಗಳೇನು; | • ಕೊಳಗೇರಿಗಳಲ್ಲಿ ಯೋಜನೆಯಡಿ ಅನುಮೋದಿತ ಮನೆಗಳನ್ನು ಹಾಲಿ ಗುಡಿಸಲುಗಳನ್ನು ತೆರವುಗೊಳಿಸಿ ಹಂತ ಹಂತವಾಗಿ ಪ್ರಾರಂಭಿಸಲಾಗಿರುತ್ತದೆ.<br>• ಕೊಳಗೇರಿ ನಿವಾಸಿಗಳು ಆರ್ಥಿಕ ಮತ್ತು ಸಾಮಾಜಿಕವಾಗಿ ಅತ್ಯಂತ ಹಿಂದುಳಿದವರಾಗಿದ್ದು, ಯೋಜನೆಯಡಿ ಫಲಾನುಭವಿಗಳು ಪಾವತಿಸಬೇಕಾದ ವಂತಿಕೆ ಮೊತ್ತವನ್ನು ಪಾವತಿಸುವಲ್ಲಿ ವಿಳಂಬವಾಗಿರುತ್ತದೆ.<br>• ಫಲಾನುಭವಿಗಳಿಂದ ರೂ.1.00 ಲಕ್ಷಗಳನ್ನು , ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಾಯ ಧನ ಹಾಗೂ ರಾಜ್ಯ ಸರ್ಕಾರದಿಂದ ಫಲಾನುಭವಂತಿಕೆ ಬಿಡುಗಡೆಗೆ ಅನುಗುಣವಾಗಿ ಪ್ರಗತಿಯಲ್ಲಿರುವ ಮನೆಗಳ ನಿರ್ಮಾಣವನ್ನು ಹಂತ-ಹಂತವಾಗಿ ಪೂರ್ಣಗೊಳಿಸಿ ಫಲಾನುಭವಿಗಳಿಗೆ ವಾಸಕ್ಕೆ ನೀಡಲು ಕ್ರಮ ವಹಿಸಲಾಗುತ್ತಿದೆ. |
| ಈ) | ಅಧಿಕಾರಿಗಳು ಮತ್ತು ಗುತ್ತಿಗೆದಾರರ ಹಣದಾಹದಿಂದ ವಿಳಂಬವಾಗುತ್ತಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ಇಲ್ಲ. |

| | | |
|---|---|---|
| ಉ) | ರಸ್ತೆ, ಚರಂಡಿ ಹೀಗೆ ಮೂಲಭೂತ ಸೌಲಭ್ಯಗಳ ವಿಳಂಬದಿಂದಾಗಿ ಮನೆಗಳ ವಿತರಣೆಗೆ ಹಿನ್ನಡೆಯಾಗಿದೆಯೇ; ಹಾಗಿದ್ದಲ್ಲಿ, ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಮೊದಲನೇ ಹಂತದಲ್ಲಿ ಪೂರ್ಣಗೊಂಡಿರುವ 2266 ಮನೆಗಳ ಪೈಕಿ ಗುಂಪು ಮನೆಗಳು/ಜಿ+ ಮನೆಗಳಿಗೆ ಬಡಾವಣೆಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸಲು ಮಂಜೂರಾತಿ ದೊರಕಿದ್ದು, ಅವುಗಳ ಅನುಷ್ಠಾನ ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿದೆ. ಮನೆಗಳ ಪೈಕಿ ಗುಂಪು ಮನೆಗಳು/ಜಿ+ ಮನೆಗಳ ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯಕ್ಕಾಗಿ ಬಿಡುಗಡೆಯಾಗುವ ಅನುದಾನಕ್ಕೆ ಅನುಗುಣವಾಗಿ ಮೂಲಭೂತ ಸೌಲಭ್ಯ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ವಇ 4 ಎಸ್‌ಬಿಎಂ 2026

B. Zameer [signature]

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು